# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:-ಬೆಳಗಾಂ ಜಿಲ್ಲಾ ಕೇಂದ್ರ ಸ್ಥಾನದಲ್ಲಿ ಇರುವ ಅಲೆಮಾರಿ/ಅರೆ ಅಲೆಮಾರಿ ಜನಾಂಗದ ಆಶ್ರಮ ಶಾಲೆಯನ್ನು ಗೋಕಾಕ್‌ಗೆ ಸ್ಥಳಾಂತರಿಸುವ ಬಗ್ಗೆ ಸರ್ಕಾರದ ಅನುಮತಿ ಕುರಿತು

ಓದಲಾಗಿದೆ:-ಪತ್ರ ಸಂ:ಹಿಂವಕನಿ:ಅಆಶಾ-1:ಪಿಪಿ-5108-09, ದಿ.08.06.2009.

ಪ್ರಸ್ತಾವನೆ:-

ಮೇಲೆ ಓದಲಾದ ಪತ್ರದಲ್ಲಿ ಸರ್ಕಾರದ ಆದೇಶದಂತೆ ಅಲೆಮಾರಿ/ಅರೆ ಅಲೆಮಾರಿ ಜನಾಂಗದ ಅಭಿವೃದ್ಧಿಗೆ 125 ಸಂಖ್ಯಾಬಲದ 4 ಆಶ್ರಮ ಶಾಲೆಗಳನ್ನು ಬೆಳಗಾಂ, ಗುಲ್ಬರ್ಗ, ಮೈಸೂರು ಹಾಗೂ ತುಮಕೂರು ಜಿಲ್ಲಾ ಕೇಂದ್ರಗಳಲ್ಲಿ 2007-08ನೇ ಸಾಲಿನಿಂದ ಜಾರಿಗೆ ಬರುವಂತೆ ಪ್ರಾರಂಭಿಸಲು ಅನುಮತಿ ನೀಡಿರುತ್ತಾರೆ. ಅದರಂತೆ ಬೆಳಗಾಂ ಜಿಲ್ಲೆಯಲ್ಲಿ 2008-09ನೇ ಸಾಲಿನಲ್ಲಿ ಆಶ್ರಮಶಾಲೆಯು ಪ್ರಾರಂಭವಾಗಿರುತ್ತದೆ. 21 ವಿದ್ಯಾರ್ಥಿಗಳು ಪ್ರವೇಶ ಪಡೆದಿರುತ್ತಾರೆ. ಆಶ್ರಮ ಶಾಲೆಯಲ್ಲಿ ಅತ್ಯಂತ ಕಡಿಮೆ ವಿದ್ಯಾರ್ಥಿಗಳು ಪ್ರವೇಶ ಪಡೆದಿರುತ್ತಾರೆ. ಈ ಆಶ್ರಮ ಶಾಲೆಯ ಮಂಜೂರಾತಿ ಸಂಖ್ಯೆಗನುಗುಣವಾಗಿ ಮಕ್ಕಳನ್ನು ಭರ್ತಿ ಮಾಡುವುದು ಕಷ್ಟಕರವಾಗಿರುವುದಾಗಿ ಹಾಗೂ ಬೇರೆ ತಾಲ್ಲೂಕಿನಿಂದ ಮಕ್ಕಳನ್ನು ಕಳುಹಿಸಿಕೊಡುವಂತೆ ಪಾಲಕರಿಗೆ ಮನವೊಲಿಸಿದರೂ ಸಹ ಸದರಿ ಆಶ್ರಮ ಶಾಲೆಗೆ ಮಕ್ಕಳು ಬರುತ್ತಿಲ್ಲವೆಂದು ಅಧಿಕಾರಿಗಳು ತಿಳಿಸಿರುತ್ತಾರೆ. ಬೆಳಗಾಂ ಜಿಲ್ಲಾ ಕೇಂದ್ರ ಸ್ಥಾನದಲ್ಲಿರುವ ಆಶ್ರಮ ಶಾಲೆಯನ್ನು ಗೋಕಾಕ್‌ಗೆ ಸ್ಥಳಾಂತರಿಸುವಂತೆ ಜಿಲ್ಲಾ ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಅಧಿಕಾರಿಗಳು ಕೋರಿರುತ್ತಾರೆ. ಹಾಗೂ ಮಾನ್ಯ ಲೋಕೋಪಯೋಗಿ ಹಾಗೂ ಸಾರ್ವಜನಿಕ ಉದ್ದಿಮೆಗಳ ಸಚಿವರು ಕೂಡಾ ಅಭಿಪ್ರಾಯ ಸೂಚಿಸಿರುವುದರಿಂದ ಆಶ್ರಮ ಶಾಲೆಯನ್ನು ಬೆಳಗಾಂ ಜಿಲ್ಲೆಯ ಗೋಕಾಕ್‌ಗೆ ಸ್ಥಳಾಂತರಿಸಲು ಅನುಮತಿ ನೀಡುವಂತೆ ಕೋರಿರುತ್ತಾರೆ.

ಸದರಿ ಪ್ರಸ್ತಾವನೆಯನ್ನು ಪರಿಶೀಲಿಸಿ, ಈ ಕೆಳಗಿನಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಸಕಇ 239 ಬಿಎಂಎಸ್ 2009 ಬೆಂಗಳೂರು, ದಿನಾಂಕ -07-2009**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಬೆಳಗಾಂ ಜಿಲ್ಲಾ ಕೇಂದ್ರ ಸ್ಥಾನದಲ್ಲಿರುವ ಅಲೆಮಾರಿ/ಅರೆ ಅಲೆಮಾರಿ ಜನಾಂಗದ ಆಶ್ರಮ ಶಾಲೆಯನ್ನು ಬೆಳಗಾಂ ಜಿಲ್ಲೆಯ ಗೋಕಾಕ್‌ಗೆ ಸ್ಥಳಾಂತರಿಸಲು ಅನುಮತಿಯನ್ನು ನೀಡಿ ಆದೇಶ ಹೊರಡಿಸಲಾಗಿದೆ.

ಕರ್ನಾಟಕದ ರಾಜ್ಯಪಾಲರ ಆದೇಶಾನುಸಾರ,
ಮತ್ತು ಅವರ ಹೆಸರಿನಲ್ಲಿ

(ಎಂ.ಎಂ.ಬಾಬು)
ಸರ್ಕಾರದ ಅಧೀನ ಕಾರ್ಯದರ್ಶಿ-3,
ಸಮಾಜ ಕಲ್ಯಾಣ ಇಲಾಖೆ.

ಗೆ,

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ನಿರ್ದೇಶಕರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು.
3. ಮಾನ್ಯ ಲೋಕೋಪಯೋಗಿ ಹಾಗೂ ಸಾರ್ವಜನಿಕ ಉದ್ದಿಮೆಗಳ ಸಚಿವರು, 3ನೇ ಮಹಡಿ, ವಿಕಾಸ ಸೌಧ, ಬೆಂಗಳೂರು
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್, ಗೋಕಾಕ್
5. ಸರ್ಕಾರದ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಸಮಾಜ ಕಲ್ಯಾಣ ಇಲಾಖೆ, ವಿಕಾಸ ಸೌಧ
6. ಶಾಖಾ ರಕ್ಷಾಕವಚ ಹೆಚ್ಚುವರಿ ಪ್ರತಿಗಳು.